**ಕರ್ನಾಟಕ ಸರ್ಕಾರ**

**(ಕೃಷಿ ಇಲಾಖೆ)**

ಕೃಷಿ ಆಯುಕ್ತರ ಕಾರ್ಯಾಲಯ, ನಂ.01, ಶೇಷಾದ್ರಿ ರಸ್ತೆ, ಬೆಂಗಳೂರು-01.

ಸಂಖ್ಯೆ:ಜಕೃನಿ(ಬೆವಿ)/PMFBY/ಮುಂ2025/ಅಧಿಸೂಚನೆ/4/2025-26 ದಿನಾಂಕ:07.05.2025

**ಸುತ್ತೋಲೆ**

ವಿಷಯ: ಬರ, ನೆರೆ/ಪ್ರವಾಹಗಳಿಂದ ಬೆಳೆ ಹಾನಿ ಆಗಿರುವ ಪ್ರದೇಶದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ ಬೆಳೆ ವಿಮೆ ನೋಂದಾಯಿಸಿದ ರೈತರಿಗೆ ಸೂಕ್ತ ಪರಿಹಾರವನ್ನು ಇತ್ಯರ್ಥಪಡಿಸಲು ಕೈಗೊಳ್ಳಬೇಕಾದ ಕ್ರಮದ ಕುರಿತು.

ಉಲ್ಲೇಖ:
1. ಕೃಷಿ ಆಯುಕ್ತರ ಸಂಖ್ಯೆ:ಜಕೃನಿ(ಬೆ.ವಿ.)/KH-19/L&MSA claims /2020-21/20, ದಿನಾಂಕ:10.08.2020.
2. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ "PMFBY Operational Guidelines 2023" ರ ಮಾರ್ಗಸೂಚಿಗಳು.

*****

ಮೇಲ್ಕಂಡ ವಿಷಯದನ್ವಯ ಉಲ್ಲೇಖಿತ (1) ರ ಸುತ್ತೋಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬರ, ನೆರೆ/ಪ್ರವಾಹಗಳಿಂದ ಬೆಳೆ ಹಾನಿ ಆಗಿರುವ ಪ್ರದೇಶದಲ್ಲಿ ಬೆಳೆ ವಿಮೆ ನೋಂದಾಯಿಸಿದ ರೈತರಿಗೆ ಪರಿಹಾರವನ್ನು ಇತ್ಯರ್ಥಪಡಿಸಲು ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ತಿಳಿಸಲಾಗಿರುತ್ತದೆ. ಉಲ್ಲೇಖ (2) ರ ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ಕೆಲವು ಮಾರ್ಪಾಡುಗಳನ್ನು ತಂದಿದ್ದು, ಇದಕ್ಕನುಗುಣವಾಗಿ ಈ ಕೆಳಗಿನ ವಿಷಯ ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಿದೆ.

**ಬಿತ್ತನೆ ವೈಫಲ್ಯ (Prevented sowing/Planting Risk):**

ಯೋಜನೆಯಡಿ ಪ್ರಸಕ್ತ ಸಾಲು ಮತ್ತು ಹಂಗಾಮಿನಲ್ಲಿ ಮಳೆ ಅಭಾವ ಅಥವಾ ಇತರೆ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದ ಅಧಿಸೂಚಿತ ಘಟಕದಲ್ಲಿ ಶೇಕಡ 75ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡಲ್ಲಿ (Prevented sowing/Planting Risk) ವಿಮಾ ಮೊತ್ತದ ಗರಿಷ್ಠ ಶೇಕಡಾ 25ರಷ್ಟು ಪರಿಹಾರವನ್ನು ವಿಮೆ ಮಾಡಿಸಿದ ರೈತರಿಗೆ ಇತ್ಯರ್ಥಪಡಿಸಿ ಮುಂದಿನ ಅವಧಿಗೆ ವಿಮೆಯನ್ನು ರದ್ದುಪಡಿಸಲಾಗುತ್ತದೆ. ಈ ಸಂಬಂಧ ಬಿತ್ತನೆ ಕ್ಷೇತ್ರದ ವರದಿಯನ್ನು ಘೋಷಿಸಲು ಜಿಲ್ಲೆಗಳ ಜಿಲ್ಲಾಧಿಕಾರಿಯವರನ್ನು ಹಾಗೂ ಮಳೆ ಮತ್ತು ಇತರೆ ಕೃಷಿ ಹವಾಮಾನದ ವರದಿಯನ್ನು ನೀಡಲು ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಬೆಂಗಳೂರು ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಸದರಿ ವರದಿಯನ್ನು Prevented sowing invoke ಮಾಡುವ ಕೊನೆಯ ದಿನಾಂಕದ 7 ದಿನಗಳು ಮುಂಚಿತವಾಗಿ ಕೃಷಿ ಇಲಾಖೆ ಕೇಂದ್ರ ಕಛೇರಿಗೆ ನಿಗದಿತ ನಮೂನೆಯಲ್ಲಿ ಸಲ್ಲಿಸಬೇಕಾಗಿರುತ್ತದೆ.

**ಮಧ್ಯಂತರ ಬೆಳೆ ವೈಫಲ್ಯ (Midseason Adversity):**

ಯೋಜನೆಯಡಿ ಪ್ರಸಕ್ತ ಸಾಲು ಮತ್ತು ಹಂಗಾಮಿನಲ್ಲಿ "ಅಧಿಸೂಚಿತ ಘಟಕದಲ್ಲಿ ಸಂಭವಿಸುವ ಹವಾಮಾನ ವೈಪರೀತ್ಯಗಳಾದ ಹೆಚ್ಚಿನ ಮಳೆ, ನೆರೆ/ಪ್ರವಾಹಗಳಿಂದ ಬೆಳೆ ಮುಳುಗಡೆ, ದೀರ್ಘಕಾಲದ ತೇವಾಂಶ ಕೊರತೆ (prolonged dry spell), ತೀವ್ರ ಬರಗಾಲ ಮುಂತಾದವುಗಳಿಂದ

ಯಾವುದೇ ಅಧಿಸೂಚಿತ ವಿಮಾ ಘಟಕದಲ್ಲಿ ಬಿತ್ತನೆಯಾದ ನಂತರ ಕಟಾವಿಗೆ ಮೊದಲು (On account payment due to Midseason Adversity), ನಿರೀಕ್ಷಿತ ಇಳುವರಿಯು ಪ್ರಾರಂಭಿಕ ಇಳುವರಿಯ ಶೇಕಡ 50ಕ್ಕಿಂತ ಕಡಿಮೆ ಇದ್ದರೆ, ವಿಮೆ ಮಾಡಿಸಿದ ರೈತರಿಗೆ ಅಂದಾಜು ಮಾಡಲಾದ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಶೇಕಡ 25ರಷ್ಟು ಹಣವನ್ನು ಮುಂಚಿತವಾಗಿ ನೀಡಲು ಅವಕಾಶವಿರುತ್ತದೆ. ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ಬೆಳೆ ಇಳುವರಿ ಮಾಹಿತಿ ಬಂದನಂತರ ಅಂತಿಮ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಈ ಹಣವನ್ನು ಹೊಂದಾಣಿಕೆ ಮಾಡಲಾಗುತ್ತದೆ. ಈ ಬಗ್ಗೆ ವರದಿಯನ್ನು ನೀಡಲು ಜಿಲ್ಲೆಯ ಜಿಲ್ಲಾಧಿಕಾರಿಯವರು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಜಿಲ್ಲಾ ಮಟ್ಟದ ಸಮಿತಿಯನ್ನು ನೋಡಲ್ ಅಧಿಕಾರಿಯವರಾದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೆಳಕಂಡಂತೆ ರಚಿಸಿ "Prevented sowing Risk" ಅಥವಾ "On account payment due to Midseason Adversity" invoke ಮಾಡಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಜಂಟಿ ಸಮಿತಿಯನ್ನು ಕೆಳಕಂಡ ಸದಸ್ಯರನ್ನೊಳಗೊಂಡು ರಚಿಸುವುದು.

- ಉಪ ಕಾರ್ಯದರ್ಶಿಗಳು (ಅಭಿವೃದ್ಧಿ) ಜಿಲ್ಲಾ ಪಂಚಾಯತ್
- ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು - ಸದಸ್ಯ ಕಾರ್ಯದರ್ಶಿ
- ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕರು
- ಜಿಲ್ಲಾ ಸಾಂಖ್ಯಿಕ ಸಂಗ್ರಹಣಾಧಿಕಾರಿಗಳು
- ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರು
- ಸ್ಥಳೀಯವಾಗಿ ಲಭ್ಯವಿರುವ ಹವಾಮಾನ ತಜ್ಞರು
- ಕೃಷಿ ವಿಜ್ಞಾನ ಕೇಂದ್ರದ ಅಥವಾ ಕೃಷಿ ವಿಶ್ವವಿದ್ಯಾಲಯದ ಪ್ರತಿನಿಧಿಗಳು
- ಸಂಬಂಧಿಸಿದ ಅನುಷ್ಠಾನ ವಿಮಾ ಕಂಪನಿಗಳ ಪ್ರತಿನಿಧಿಗಳು
- ಜಿಲ್ಲಾಧಿಕಾರಿಗಳು ಸೂಚಿಸುವ ಇತರೆ ತಜ್ಞರು/ರೈತ ಪ್ರತಿನಿಧಿಗಳು

"Prevented sowing Risk" invoke ಮಾಡಲು ಜಿಲ್ಲಾ ಮಟ್ಟದ ಜಂಟಿ ಸಮಿತಿ ಸಭೆಯ ತೀರ್ಮಾನದಂತೆ ಹಾಗೂ PMFBY Operational Guidelines-2023 ಮಾರ್ಗಸೂಚಿಯ ಪ್ಯಾರಾ 21.3 ರ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳುವುದು.

"On account payment due to Midseason Adversity" invoke ಮಾಡಲು ಕೆಳಕಂಡಂತೆ ಹಾಗೂ PMFBY Operational Guidelines-2023 ಮಾರ್ಗಸೂಚಿ ಪ್ಯಾರಾ 21.4 ರ ಪ್ರಮುಖ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳುವುದು.

1. ಬೆಳೆಯು ಬಿತ್ತನೆಯಾಗಿ ಒಂದು ತಿಂಗಳು ಆಗಿರಬೇಕು (more than one month old crop) ಮತ್ತು ಬೆಳೆ ಕಟಾವಿಗಿಂತ 15 ದಿನಕ್ಕಿಂತ ಮುಂಚಿತವಾಗಿರಬೇಕು.
2. ಮೇಲೆ ತಿಳಿಸಿರುವ ಯಾವುದೇ ಹವಾಮಾನ ವೈಪರೀತ್ಯಗಳು ಉಂಟಾದ 7 ದಿನಗಳೊಳಗೆ ಮೇಲಿನ ಸಮಿತಿಯು ಸಭೆ ಆಯೋಜಿಸಬೇಕು.
3. ಒಂದು ವಿಮಾ ಘಟಕದಲ್ಲಿ 10 ವಿವಿಧ ಅನಿಯತ ಸ್ಥಳಗಳಲ್ಲಿ (randomnly spread over locations) ನಷ್ಟದ ಮೌಲ್ಯಮಾಪನವನ್ನು ಸಭೆ ಆಯೋಜಿಸಿದ 7 ದಿನಗಳೊಳಗೆ ಮಾಡುವುದು.
4. ನಿಗದಿತ ನಮೂನೆಯಲ್ಲಿ (ಲಗತ್ತಿಸಿದೆ) ನಷ್ಟದ ಮೌಲ್ಯಮಾಪನ ಮಾಡಿದ ಒಂದು ದಿನದಲ್ಲಿ ವರದಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು.

**ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪ (Localized calamity) :**

ಯೋಜನೆಯಡಿ ಆಲಿಕಲ್ಲು, ಮಳೆ ಭೂ ಕುಸಿತ, ಬೆಳೆ ಮುಳುಗಡೆ (ಇನಂಡೇಷನ್), ಮೇಘಸ್ಫೋಟ (Cloud burst) ಮತ್ತು ಗುಡುಗು ಮಿಂಚುಗಳಿಂದಾಗಿ ಉಂಟಾಗುವ ಬೆಂಕಿ ಅವಗಡ (Natural fire due to lighting) ಗಳಿಂದ ಉಂಟಾಗುವ ನಷ್ಟದ ಅನುಗುಣವಾಗಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಯೋಜನೆಯಡಿ ಅವಕಾಶವಿರುತ್ತದೆ. ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಿಗೆ (Localized calamity) ಸಂಬಂಧಿಸಿದಂತೆ ಈ ಕೆಳಗಿನಂತೆ ಹಾಗೂ PMFBY Operational Guidelines-2023 ಪ್ಯಾರಾ 21.5 ರ ಮಾರ್ಗಸೂಚಿಗಳ ಪ್ರಮುಖ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳುವುದು.

1. ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಕಡಿಮೆ ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ನಷ್ಟದ ನಿರ್ಧರಣೆಯನ್ನು ವೈಯಕ್ತಿಕವಾಗಿ ನಿರ್ಧರಿಸಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಯೋಜನೆಯಡಿ ಅವಕಾಶವಿರುತ್ತದೆ.
2. ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಹೆಚ್ಚು ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ಅಂತಹ ಅಧಿಸೂಚಿತ ಘಟಕದಲ್ಲಿ ಬೆಳೆ ವಿಮೆಗೆ ಒಳಪಟ್ಟ ರೈತರಲ್ಲಿ ಬೆಳೆ ನಷ್ಟವಾದ ರೈತರಿಗೆ ಮಾತ್ರ ಮಾದರಿ ಸಮೀಕ್ಷೆಯಲ್ಲಿ ನಿಗದಿಪಡಿಸಿದ ಬೆಳೆ ನಷ್ಟಕ್ಕನುಗುಣವಾಗಿ ಲೆಕ್ಕ ಹಾಕಲಾದ ಬೆಳೆ ವಿಮಾ ಪರಿಹಾರದ ಶೇಕಡ 25 ರಷ್ಟು ಹಣವನ್ನು ಮುಂಚಿತವಾಗಿ ನೀಡಲು ಅವಕಾಶವಿರುತ್ತದೆ. ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ಬೆಳೆ ಇಳುವರಿ ಮಾಹಿತಿ ಬಂದನಂತರ ಅಂತಿಮ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಈ ಹಣವನ್ನು ಹೊಂದಾಣಿಕೆ ಮಾಡಲಾಗುತ್ತದೆ.
3. ಇಂತಹ ಸ್ಥಳೀಯ ಗಂಡಾಂತರಗಳ ಕಾರಣದಿಂದ ಬೆಳೆ ನಷ್ಟ ಸಂಭವಿಸಿದರೆ ಬೆಳೆ ವಿಮೆ ಮಾಡಿಸಿರುವ ರೈತರು ಈ ಬಗ್ಗೆ ನೇರವಾಗಿ ಸಂಬಂಧಪಟ್ಟ ಅನುಷ್ಠಾನಗೊಳಿಸುವ ವಿಮಾ ಸಂಸ್ಥೆಗಳ ಕಛೇರಿಗಳಿಗೆ ಅಥವಾ ಹಣಕಾಸು ಸಂಸ್ಥೆ ಅಥವಾ ಕೃಷಿ/ತೋಟಗಾರಿಕೆ ಇಲಾಖೆ ಮೂಲಕ ತಕ್ಷಣ ಸೂಚನೆ ನೀಡಬೇಕು.
4. ಇಂತಹ ಸಂದರ್ಭದಲ್ಲಿ ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು 72 ಗಂಟೆಗಳೊಳಗಾಗಿ ತಿಳಿಸಬೇಕು.
5. ನಷ್ಟದ ಬಗೆಗಿನ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ವಿಮಾ ಸಂಸ್ಥೆಗಳು ಬೆಳೆ ನಷ್ಟವನ್ನು ನಿರ್ಧರಿಸುವುದಕ್ಕೆ ನಷ್ಟ ನಿರ್ಧಾರಕರನ್ನು ಸಂಬಂಧಪಟ್ಟ ಪ್ರದೇಶಕ್ಕೆ 48 ಗಂಟೆಯೊಳಗಾಗಿ ನಿಯೋಜಿಸುವುದು.
6. ವಿಮಾ ಸಂಸ್ಥೆಯಿಂದ ನೇಮಿಸಲ್ಪಟ್ಟ ನಷ್ಟ ನಿರ್ಧಾರಕರು ಮತ್ತು ಸ್ಥಳೀಯ ತಾಲೂಕು/ ಹೋಬಳಿ ಮಟ್ಟದ ಕೃಷಿ ಮತ್ತು ತೋಟಗಾರಿಕಾ ಇಲಾಖಾ ಅಧಿಕಾರಿಗಳು ಜಂಟಿಯಾಗಿ, ಹಾನಿಗೊಳಗಾದ ರೈತರ ಸಮ್ಮುಖದಲ್ಲಿ ಬೆಳೆ ನಷ್ಟ ನಿರ್ಧರಿಸುವುದು.
7. ಸದರಿ ಬೆಳೆ ನಷ್ಟದ ವರದಿಯನ್ನು ಜಿಲ್ಲೆಗಳ ಇಲಾಖಾ ಮುಖ್ಯಸ್ಥರು ಅನುಷ್ಠಾನ ವಿಮಾ ಸಂಸ್ಥೆಗಳಿಗೆ ನೇರವಾಗಿ ಸಲ್ಲಿಸಲು ಕ್ರಮ ಕೈಗೊಳ್ಳುವುದು.

**ಕೊಯ್ಲಿನೋತ್ತರ ಬೆಳೆ ನಷ್ಟ (Post harvest losses):**

ಕೊಯ್ಲಿನೋತ್ತರ ಬೆಳೆ ನಷ್ಟಕ್ಕೆ ಸಂಬಂಧಿಸಿದಂತೆ (Post harvest losses) ಈ ಕೆಳಗಿನಂತೆ ಹಾಗೂ PMFBY Operational Guidelines-2023 ಪ್ಯಾರಾ 21.6 ರ ಮಾರ್ಗಸೂಚಿಗಳ ಪ್ರಮುಖ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳುವುದು.

1. ಯೋಜನೆಯಡಿ ಕೆಲವು ಬೆಳೆಗಳಿಗೆ ಬೆಳೆ ಕಟಾವಿನ ನಂತರ ಬೆಳೆಯನ್ನು ಜಮೀನಿನಲ್ಲೇ ಒಣಗಲು ಬಿಟ್ಟಂತಹ ಸಂದರ್ಭದಲ್ಲಿ (Post harvest losses) ಕಟಾವು ಮಾಡಿದ ಎರಡು ವಾರಗಳೊಳಗೆ (ಹದಿನಾಲ್ಕು ದಿನಗಳು) ಚಂಡಮಾರುತ, ಚಂಡಮಾರುತ ಸಹಿತ ಮಳೆ ಮತ್ತು ಅಕಾಲಿಕ ಮಳೆಯಿಂದಾಗಿ ಬೆಳೆ ನಾಶವಾದರೆ ವೈಯಕ್ತಿಕವಾಗಿ (case to case basis) ನಷ್ಟ ನಿರ್ಧಾರವನ್ನು ಮಾಡಿ ಬೆಳೆ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅವಕಾಶವಿರುತ್ತದೆ.

2. ರೈತರು ಈ ಬಗ್ಗೆ ಸಂಬಂಧಪಟ್ಟ ಬ್ಯಾಂಕ್ ಅಥವಾ ಅನುಷ್ಠಾನಗೊಳಿಸುವ ವಿಮಾ ಸಂಸ್ಥೆಗಳ ಕಛೇರಿಗಳಿಗೆ ನೇರವಾಗಿ ಅಥವಾ ಕೃಷಿ/ತೋಟಗಾರಿಕೆ ಇಲಾಖೆ ಮೂಲಕ ತಕ್ಷಣ ಸೂಚನೆ ನೀಡಬೇಕು ಮತ್ತು ಯಾವುದೇ ಸಂದರ್ಭದಲ್ಲಿ ಬೆಳೆವಿಮೆ ಮಾಡಿಸಿದ ಬೆಳೆಯ ವಿವರಗಳನ್ನು ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು 72 ಗಂಟೆಗಳೊಳಗಾಗಿ ತಿಳಿಸಬೇಕು.

3. ನಷ್ಟದ ಬಗೆಗಿನ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ವಿಮಾ ಸಂಸ್ಥೆಗಳು ಬೆಳೆ ನಷ್ಟವನ್ನು ನಿರ್ಧರಿಸುವುದಕ್ಕೆ ನಷ್ಟ ನಿರ್ಧಾರಕರನ್ನು ಸಂಬಂಧಪಟ್ಟ ಪ್ರದೇಶಕ್ಕೆ 48 ಗಂಟೆಯೊಳಗಾಗಿ ನಿಯೋಜಿಸಲಾಗುವುದು.

4. ವಿಮಾ ಸಂಸ್ಥೆಯಿಂದ ನೇಮಿಸಲ್ಪಟ್ಟ ನಷ್ಟ ನಿರ್ಧಾರಕರು ಮತ್ತು ಸ್ಥಳೀಯ ತಾಲ್ಲೂಕು/ಹೋಬಳಿ ಮಟ್ಟದ ಕೃಷಿ ಮತ್ತು ತೋಟಗಾರಿಕಾ ಇಲಾಖಾ ಅಧಿಕಾರಿಗಳು ಜಂಟಿಯಾಗಿ, ಹಾನಿಗೊಳಗಾದ ರೈತರ ಸಮ್ಮುಖದಲ್ಲಿ ವಿಮೆ ಸಂಸ್ಥೆಯಿಂದ ನೇಮಿಸಲ್ಪಟ್ಟ ನಷ್ಟ ನಿರ್ಧಾರಕರು ಮತ್ತು ಸ್ಥಳೀಯ ತಾಲ್ಲೂಕು/ ಹೋಬಳಿ ಮಟ್ಟದ ಕೃಷಿ ಮತ್ತು ತೋಟಗಾರಿಕಾ ಇಲಾಖಾ ಅಧಿಕಾರಿಗಳು ಜಂಟಿಯಾಗಿ, ಹಾನಿಗೊಳಗಾದ ರೈತರ ಸಮ್ಮುಖದಲ್ಲಿ ಬೆಳೆ ನಷ್ಟ ನಿರ್ಧರಿಸಲಾಗುವುದು.

5. ಸದರಿ ಬೆಳೆ ನಷ್ಟದ ವರದಿಯನ್ನು ಜಿಲ್ಲೆಗಳ ಇಲಾಖಾ ಮುಖ್ಯಸ್ಥರು ಅನುಷ್ಠಾನ ವಿಮಾ ಸಂಸ್ಥೆಗಳಿಗೆ ನೇರವಾಗಿ ಸಲ್ಲಿಸಲು ಕ್ರಮ ಕೈಗೊಳ್ಳುವುದು.

6. ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಕಡಿಮೆ ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ನಷ್ಟದ ನಿರ್ಧರಣೆಯನ್ನು ವೈಯಕ್ತಿಕವಾಗಿ ನಿರ್ಧರಿಸಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಯೋಜನೆಯಡಿ ಅವಕಾಶವಿರುತ್ತದೆ.

7. ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಹೆಚ್ಚು ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ಅಂತಹ ಅಧಿಸೂಚಿತ ಘಟಕದಲ್ಲಿ ಬೆಳೆ ವಿಮೆಗೆ ಒಳಪಟ್ಟ ರೈತರಲ್ಲಿ ಬೆಳೆ ನಷ್ಟವಾದ ರೈತರಿಗೆ ಮಾತ್ರ ಮಾದರಿ ಸಮೀಕ್ಷೆಯಲ್ಲಿ ನಿಗದಿಪಡಿಸಿದ ಬೆಳೆ ನಷ್ಟಕ್ಕನುಗುಣವಾಗಿ ಲೆಕ್ಕ ಹಾಕಲಾದ ಬೆಳೆ ವಿಮಾ ಪರಿಹಾರದ ಶೇಕಡ 25 ರಷ್ಟು ಹಣವನ್ನು ಮುಂಚಿತವಾಗಿ ನೀಡಲು ಅವಕಾಶವಿರುತ್ತದೆ.

ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ಯಾರಾ 21.7 ರಲ್ಲಿ "Claim settlement under Multiple Events of Similar or Different Perils" ಕುರಿತಾಗಿ ತಿಳಿಸಲಾಗಿರುತ್ತದೆ. ಪ್ರಕೃತಿ ವಿಕೋಪಗಳಿಂದ ಯಾವುದೇ ಅಧಿಸೂಚಿತ ಬೆಳೆ ವಿಫಲಗೊಂಡಲ್ಲಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಿದ ನಂತರ ಪಾವತಿಯಾದ ವಿಮಾ ಪರಿಹಾರ ಮೊತ್ತವನ್ನು ಒಟ್ಟು ವಿಮಾ ಮೊತ್ತದಲ್ಲಿ ಕಡಿತಗೊಳಿಸಲಾಗುತ್ತದೆ. ಇದೇ ರೀತಿ ವಿವಿಧ ವಿಪತ್ತುಗಳಿಗೆ ಪಾವತಿ ಮಾಡುವ ವಿಮಾ ಪರಿಹಾರ ಮೊತ್ತವನ್ನು ಒಟ್ಟು ವಿಮಾ ಮೊತ್ತದಲ್ಲಿ ಕಡಿತಗೊಳಿಸಲಾಗುತ್ತದೆ. ಅಂತಿಮ ಇಳುವರಿ ಆಧಾರಿತ ವಿಮಾ ಪರಿಹಾರ ಮೊತ್ತ ಲೆಕ್ಕಾಚಾರ ಮಾಡುವಾಗ ಇಳುವರಿ ಕೊರತೆಯನ್ನು ಲಭ್ಯವಿರುವ ವಿಮಾ ಮೊತ್ತದೊಂದಿಗೆ ಗುಣಿಸಿ ಲೆಕ್ಕಾಚಾರ ಮಾಡಲಾಗುವುದು.

ಕೃಷಿ ಆಯುಕ್ತರು

**ಪ್ರತಿಯನ್ನು ಈ ಕೆಳಗಿನಂತೆ ಮಾಹಿತಿಗಾಗಿ ಸಲ್ಲಿಸಿದೆ:**

1) ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

**ಪ್ರತಿಯನ್ನು ಈ ಕೆಳಗಿನಂತೆ ಕಳುಹಿಸಿದೆ:**

1) ನಿರ್ದೇಶಕರು, ತೋಟಗಾರಿಕಾ ಇಲಾಖೆ, ಲಾಲ್ ಬಾಗ್, ಬೆಂಗಳೂರು.
2) ಸಂಯೋಜಕರು, ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ, ಅಪೆಕ್ಸ್ ಬ್ಯಾಂಕ್, ಚಾಮರಾಜಪೇಟೆ, ಬೆಂಗಳೂರು.
3) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
4) ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
5) ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು.
6) ಎಲ್ಲಾ ಜಿಲ್ಲಾ ತೋಟಗಾರಿಕಾ ಉಪ ನಿರ್ದೇಶಕರು
7) ಎಲ್ಲಾ ಜಿಲ್ಲೆಯ ಲೀಡ್ ಬ್ಯಾಂಕುಗಳ ವ್ಯವಸ್ಥಾಪಕರು
8) ಎಲ್ಲಾ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳ ವ್ಯವಸ್ಥಾಪಕರು
9) ಎಲ್ಲಾ ನೋಡಲ್ ಬ್ಯಾಂಕುಗಳ ವ್ಯವಸ್ಥಾಪಕರು
10) ಎಲ್ಲಾ ಜಿಲ್ಲಾ ಸಹಕಾರ ಬ್ಯಾಂಕುಗಳ ವ್ಯವಸ್ಥಾಪಕರು
11) ಅನುಷ್ಠಾನ ವಿಮಾ ಸಂಸ್ಥೆಗಳು

(ಕ್ರಮ ಸಂಖ್ಯೆ 6 ತೋಟಗಾರಿಕಾ ಆಯುಕ್ತರು/ನಿರ್ದೇಶಕರ ಮೂಲಕ ಕ್ರಮ ಸಂಖ್ಯೆ 7, 8 & 9 ರವರಿಗೆ - ಎಸ್.ಎಲ್.ಬಿ.ಸಿ ಮೂಲಕ ಹಾಗೂ ಕ್ರಮ ಸಂಖ್ಯೆ 10 -ಅಪೆಕ್ಸ್ ಬ್ಯಾಂಕ್ ಮೂಲಕ ಕಳುಹಿಸಿದೆ.)